ದೇವಸ್ಥಾನಗಳಿಗೆ ಅನುದಾನ

1113 (2023) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ :– ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನಾ ಮತ್ತು ಮುಜರಾಯಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

ಅ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ದೇವಸ್ಥಾನಗಳಿಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ;

ಆ) ಹಾಗಿದ್ದಲ್ಲಿ, ಈ ಅನುದಾನವನ್ನು ಸಂಪೂರ್ಣವಾಗಿ ದೇವಸ್ಥಾನಗಳಿಗೆ ಬಿಡುಗಡೆ ಮಾಡಲಾಗಿದೇ;

ಇ) ವಿಜಯಪುರ ಜಿಲ್ಲೆಯ ಎಷ್ಟು ದೇವಸ್ಥಾನಗಳಿಗೆ ಹಣ ಬಿಡುಗಡೆ ಮಾಡಲಾಗಿದೆ; (ವಿವರ ನೀಡುವುದು)

ಈ) ಅನುದಾನದ ಬಿಡುಗಡೆ ವಿಳಂಬವಾಗಲು ಕಾರಣವೇನು?

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನಾ ಮತ್ತು ಮುಜರಾಯಿ ಸಚಿವರು) :–

ಅ) ಕಳೆದ ಮೂರು ವರ್ಷಗಳಲ್ಲಿ ಧಾರ್ಮಿಕ ದತ್ತಿ ಇಲಾಖೆಯಿಂದ ದೇವಸ್ಥಾನಗಳ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳಡಿ ಒಟ್ಟು ರೂ. 611.48 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

(ರೂ. ಕೋಟಿಗಳಲ್ಲಿ)

ಕ್ರ.ಸಂ.	ಯೋಜನೆ	2011–12	2012–13	2013–14
1	ದುರಸ್ಥಿ ಜೀರ್ಣೋದ್ಧಾರ, ನವಿನಿರ್ಮಾಣ	167/87	250.22	124.82
2	ಆರಾಧನಾ	8.37	8.37	10.54
3	ವಿಶೇಷ ಘಟಕ	8.38	4.19	19.05
4	ಗಿರಿಜನ ಉಪ ಯೋಜನೆ	3.24	2.43	4.00
	ಒಟ್ಟು	**187.86**	**265.21**	**158.41**

ಆ) ಹೌದು

ಇ) ವಿಜಯಪುರ ಧಾರ್ಮಿಕ ಸಂಸ್ಥೆಗಳಿಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ.

(ರೂ. ಲಕ್ಷಗಳಲ್ಲಿ)

ವರ್ಷ	ಧಾರ್ಮಿಕ ಸಂಸ್ಥೆಗಳು		ಬಿಡುಗಡೆ ಮಾಡಿದ ಮೊತ್ತ
2011–12	174		387.00
2012–13	174		936.50
2013–14	49	198.00	398.00
	(ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 25.00 ಲಕ್ಷದಂತೆ)	200.00	
ಒಟ್ಟು	397		1721.50

ಈ) ಸಂಬಂಧಿಸಿದ ಧಾರ್ಮಿಕ ಸಂಸ್ಥೆಗಳಿಂದ ಪ್ರಸ್ತಾವನೆಗಳು ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಮಾನುಸಾರ ಸಕಾಲದಲ್ಲಿ ಬಾರದೇ ಇರುವುದರಿಂದ ಹಾಗೂ ಮಾರ್ಗಸೂಚಿಯ ನಿಬಂಧನೆಗಳನ್ವಯ ಜಿಲ್ಲಾಧಿಕಾರಿಗಳು ಕ್ರಮವಹಿಸಬೇಕಾಗಿರುವುದರಿಂದ ಅನುದಾನ ಬಿಡುಗಡೆಗೆ ವಿಳಂಬವಾಗಿರುತ್ತದೆ.

ಟಿ.ಡಿ.ಆರ್. ನೀಡುವುದು

1114 (1920) ಶ್ರೀ ಅರವಿಂದ ಲಿಂಬಾವಳಿ (ಮಹದೇವಪುರ) :– ಮಾನ್ಯ ಮುಖ್ಯಮಂತ್ರಿಗಳು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಜಮೀನಿನ ಮಾಲೀಕರು, ಸಾರ್ವಜನಿಕ ಉಪಯೋಗಕ್ಕಾಗಿ ಬಿಟ್ಟುಕೊಡುವ ಜಮೀನಿನ ಟಿ.ಡಿ.ಆರ್. ನೀಡಲಾಗುವುದೇ;

ಆ) ಸಾರ್ವಜನಿಕ ಉದ್ದೇಶಕ್ಕೆ ಜಮೀನು ನೀಡಿದ ಮಾಲೀಕರಿಗೆ ಟಿ.ಡಿ.ಆರ್. ನೀಡುವಲ್ಲಿ ಬಹಳಷ್ಟು ವಿಳಂಭ ಹಾಗೂ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;